**C**

**CCE PF**
**REVISED**

**ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, ಮಲ್ಲೇಶ್ವರಂ, ಬೆಂಗಳೂರು – 560 003**

**KARNATAKA SECONDARY EDUCATION EXAMINATION BOARD, MALLESWARAM, BANGALORE – 560 003**

**ಎಸ್.ಎಸ್.ಎಲ್.ಸಿ. ಪರೀಕ್ಷೆ, ಮಾರ್ಚ್ / ಏಪ್ರಿಲ್, 2019**

**S.S.L.C. EXAMINATION, MARCH / APRIL, 2019**

# ಮಾದರಿ ಉತ್ತರಗಳು
# MODEL ANSWERS

ದಿನಾಂಕ : 02. 04. 2019 ] **ಸಂಕೇತ ಸಂಖ್ಯೆ : 83-K (Chem.)**

Date : 02. 04. 2019 ] **CODE NO. : 83-K (Chem.)**

## ವಿಷಯ : ವಿಜ್ಞಾನ
## Subject : SCIENCE

**(ರಸಾಯನಶಾಸ್ತ್ರ / Chemistry)**

**(ಹೊಸ ಪಠ್ಯಕ್ರಮ / New Syllabus)**

**(ಖಾಸಗಿ ಅಭ್ಯರ್ಥಿ / Private Fresh)**



**(ಕನ್ನಡ ಭಾಷಾಂತರ / Kannada Version)**

**[ ಗರಿಷ್ಠ ಅಂಕಗಳು : 100**

**[ Max. Marks : 100**

| ಪ್ರಶ್ನೆ ಸಂಖ್ಯೆ | ಪ್ರಶ್ನಾನುಸಾರ ಮೌಲ್ಯಮಾಪನ | ಅಂಕಗಳು |
|---|---|---|
| 2. | ಪ್ರೋಪೆನಾಲ್ ( Propanol ) ಮತ್ತು ( Propanal ) ಪ್ರೋಪೆನ್ಯಾಲ್ ಗಳಲ್ಲಿರುವ ಕ್ರಿಯಾಗುಂಪುಗಳು ಕ್ರಮವಾಗಿ<br>(A) — OH ಮತ್ತು — CHO (B) — OH ಮತ್ತು — COOH<br>(C) — CHO ಮತ್ತು — COOH (D) — CHO ಮತ್ತು — CO<br>***ಉತ್ತರ :*** (A) — OH ಮತ್ತು — CHO | 1 |
| 5. | ಕೆಳಗಿನವುಗಳಲ್ಲಿ ತಟಸ್ಥೀಕರಣ ಕ್ರಿಯೆಯನ್ನು ಪ್ರತಿನಿಧಿಸುವ ರಾಸಾಯನಿಕ ಸಮೀಕರಣ<br>(A) $BaCl_2 + H_2SO_4 \rightarrow BaSO_4 + 2HCl$<br>(B) $MnO_2 + 4\,HCl \rightarrow MnCl_2 + 2H_2O + Cl_2$<br>(C) $2\,NaOH + H_2SO_4 \rightarrow Na_2SO_4 + 2H_2O$<br>(D) $AgNO_3 + HCl \rightarrow AgCl + HNO_3$<br>***ಉತ್ತರ :*** (C) $2\,NaOH + H_2SO_4 \rightarrow Na_2SO_4 + 2H_2O$ | 1 |

| ಪ್ರಶ್ನೆ ಸಂಖ್ಯೆ | ಪ್ರಶ್ನಾನುಸಾರ ಮೌಲ್ಯಮಾಪನ | ಅಂಕಗಳು |
|---|---|---|
| 8. | '$X$' ಧಾತುವಿನ ಎಲೆಕ್ಟ್ರಾನ್ ವಿನ್ಯಾಸ 2, 8, 8, 1 ಮತ್ತು '$Y$' ಧಾತುವಿನ ಎಲೆಕ್ಟ್ರಾನ್ ವಿನ್ಯಾಸ 2, 8, 7 ಆಗಿದೆ. ಹಾಗಾದರೆ ಈ ಧಾತುಗಳ ನಡುವೆ ಉಂಟಾಗುವ ಬಂಧದ ವಿಧ<br>(A) ಕೋವೇಲೆಂಟ್ ಬಂಧ (B) ಹೈಡ್ರೋಜನ್ ಬಂಧ<br>(C) ಲೋಹೀಯ ಬಂಧ (D) ಅಯಾನಿಕ ಬಂಧ<br>***ಉತ್ತರ :*** (D) ಅಯಾನಿಕ ಬಂಧ | 1 |
| 12. | ತುರಿಕೆ ಗಿಡದ ಎಲೆಗಳ ಚುಚ್ಚುವ ಕೂದಲುಗಳಲ್ಲಿರುವ ಆಮ್ಲವನ್ನು ಹೆಸರಿಸಿ.<br>***ಉತ್ತರ :***<br>ಮೆಥನಾಯಿಕ್ ಆಮ್ಲ / ಫಾರ್ಮಿಕ್ ಆಮ್ಲ | 1 |
| 15. | ಲೋಹೋದ್ಧರಣದಲ್ಲಿ ಹುರಿಯುವಿಕೆ ಎಂದರೇನು ?<br>***ಉತ್ತರ :***<br>ಲೋಹದ ಅದಿರನ್ನು ಅಧಿಕ ಪ್ರಮಾಣದ ಗಾಳಿಯಲ್ಲಿ ಹೆಚ್ಚಿನ ಉಷ್ಣತೆಯಲ್ಲಿ ಕಾಸುವುದು. | 1 |
| 20. | ಸೀಸದ ನೈಟ್ರೇಟ್‌ಅನ್ನು ಕಾಯಿಸಿದಾಗ ಬಿಡುಗಡೆಯಾಗುವ ಕಂದು ಬಣ್ಣದ ಧೂಮವನ್ನು ಹೆಸರಿಸಿ. ಈ ಕ್ರಿಯೆಗೆ ಸರಿದೂಗಿಸಿದ ರಾಸಾಯನಿಕ ಸಮೀಕರಣವನ್ನು ಬರೆಯಿರಿ.<br>***ಉತ್ತರ :***<br>★ ನೈಟ್ರೋಜನ್ ಡೈ ಆಕ್ಸೈಡ್ ( $NO_2$ ) 1<br>★ $2\,Pb(NO_3)_2 \rightarrow 2PbO + 4NO_2 + O_2$ 1 | 2 |
| 23. | ರಚನಾ ಸಮಾಂಗಿಗಳು ಎಂದರೇನು ? ಸಮಾಂಗತೆಯನ್ನು ತೋರಿಸುವ ಆಲ್ಕೇನ್‌ಗಳ ಮೊದಲ ಸದಸ್ಯನನ್ನು ಹೆಸರಿಸಿ.<br>***ಉತ್ತರ :***<br>ಒಂದೇ ಅಣುಸೂತ್ರ ಆದರೆ ವಿಭಿನ್ನ ರಚನೆ ಹೊಂದಿರುವ ಸಂಯುಕ್ತಗಳನ್ನು ರಚನಾ ಸಮಾಂಗಿಗಳು ಎನ್ನುವರು. 1<br>ಬ್ಯೂಟೇನ್ ಅಥವಾ $C_4H_{10}$ 1 | 2 |

| ಪ್ರಶ್ನೆ ಸಂಖ್ಯೆ | ಪ್ರಶ್ನಾನುಸಾರ ಮೌಲ್ಯಮಾಪನ | ಅಂಕಗಳು |
|---|---|---|
| 25. | ಸಾರರಿಕ್ತ ಸಲ್ಫ್ಯೂರಿಕ್ ಆಮ್ಲದೊಂದಿಗೆ ಸತುವಿನ ಚೂರುಗಳ ವರ್ತನೆಯನ್ನು ತೋರಿಸುವ ಮತ್ತು ಉರಿಸುವಿಕೆಯ ಮೂಲಕ ಹೈಡ್ರೋಜನ್ ಅನಿಲದ ಪರೀಕ್ಷೆಯಲ್ಲಿ ಉಪಯೋಗಿಸುವ ಉಪಕರಣದ ಜೋಡಣೆಯ ಚಿತ್ರವನ್ನು ಬರೆಯಿರಿ. ಕೆಳಗಿನ ಭಾಗಗಳನ್ನು ಗುರುತಿಸಿ :<br>(i) ಸಾಬೂನಿನ ದ್ರಾವಣ (ii) ನಿರ್ಗಮ ನಾಳ<br>***ಉತ್ತರ :***<br><br><br>1 + ½ + ½ | 2 |
| 29. | ನೀರಿನ ವಿದ್ಯುದ್ವಿಭಜನೆಯಲ್ಲಿ ಉಪಯೋಗಿಸುವ ಉಪಕರಣದ ಚಿತ್ರವನ್ನು ಬರೆಯಿರಿ. ಕೆಳಗಿನ ಭಾಗಗಳನ್ನು ಗುರುತಿಸಿ :<br>(i) ಗ್ರಾಫೈಟ್ ದಂಡ<br>(ii) ಕ್ಯಾಥೋಡ್<br>***ಉತ್ತರ :***<br><br><br>(ಗ್ರಾಫೈಟ್ ದಂಡವನ್ನು ಬ್ಯಾಟರಿಯ ಋಣ ತುದಿಗೆ ಸಂಪರ್ಕಿಸಿ, ಕ್ಯಾಥೋಡ್ ಅನ್ನು ಗುರುತಿಸಬಹುದು) 1 + ½ + ½ | 2 |

| ಪ್ರಶ್ನೆ ಸಂಖ್ಯೆ | ಪ್ರಶ್ನಾನುಸಾರ ಮೌಲ್ಯಮಾಪನ | ಅಂಕಗಳು |
|---|---|---|

32. ಜಲೀಯ ಸೋಡಿಯಂ ಕ್ಲೋರೈಡ್ ದ್ರಾವಣದಲ್ಲಿ ಕೆಂಪು ಲಿಟ್ಮಸ್ ಕಾಗದ ಮತ್ತು ನೀಲಿ ಲಿಟ್ಮಸ್ ಕಾಗದಗಳನ್ನು ಅದ್ದಿದಾಗ ಅವುಗಳ ಬಣ್ಣದಲ್ಲಿ ಯಾವುದೇ ಬದಲಾವಣೆ ಇರುವುದಿಲ್ಲ. ಆದರೆ ಅದೇ ದ್ರಾವಣದ ಮೂಲಕ ನೇರ ವಿದ್ಯುತ್ ಹಾಯಿಸಿದ ನಂತರ ಕೆಂಪು ಲಿಟ್ಮಸ್ ನೀಲಿ ಬಣ್ಣಕ್ಕೆ ತಿರಗುತ್ತದೆ. ಈ ಬದಲಾವಣೆಗೆ ಕಾರಣವಾದ ಉತ್ಪನ್ನ ಯಾವುದು ? ಈ ಉತ್ಪನ್ನದ ಯಾವುದಾದರೂ ಎರಡು ಉಪಯೋಗಗಳನ್ನು ತಿಳಿಸಿ.

***ಉತ್ತರ :***

ಸೋಡಿಯಂ ಹೈಡ್ರಾಕ್ಸೈಡ್ / NaOH. 1

(i) ಲೋಹಗಳ ಜಿಡ್ಡು ನಿವಾರಣೆ

(ii) ಸಾಬೂನು ಮತ್ತು ಮಾರ್ಜಕಗಳು

(iii) ಕಾಗದದ ತಯಾರಿಕೆ


(iv) ಕೃತಕ ನೂಲುಗಳು (ಯಾವುದಾದರೂ ಎರಡು) $2 \times \frac{1}{2}$ 2

36. ಈ ಕೆಳಗಿನ ಸಂಯುಕ್ತಗಳ ರಚನಾಸೂತ್ರಗಳನ್ನು ಬರೆಯಿರಿ :


(i) ಸೈಕ್ಲೋ ಹೆಕ್ಸೇನ್

(ii) ಕ್ಲೋರೋಈಥೇನ್

***ಉತ್ತರ :***




1




1 2


39. ತಾಮ್ರದ ಸಲ್ಫೇಟ್ ದ್ರಾವಣದಿಂದ ತಾಮ್ರವನ್ನು ಶುದ್ಧೀಕರಿಸಲು ಉಪಯೋಗಿಸುವ ಉಪಕರಣದ ಚಿತ್ರವನ್ನು ಬರೆದು, ಕೆಳಗಿನ ಭಾಗಗಳನ್ನು ಗುರುತಿಸಿ :

(i) ಆ್ಯನೋಡ್

(ii) ಆಮ್ಲೀಕರಿಸಿದ ತಾಮ್ರದ ಸಲ್ಫೇಟ್ ದ್ರಾವಣ

| ಪ್ರಶ್ನೆ ಸಂಖ್ಯೆ | ಪ್ರಶ್ನಾನುಸಾರ ಮೌಲ್ಯಮಾಪನ | ಅಂಕಗಳು |
|---|---|---|

*ಉತ್ತರ :*




1 + ½ + ½ — 2

42. ಈ ಕೆಳಗಿನ ಕ್ರಿಯೆಗಳಿಗೆ ಸರಿದೂಗಿಸಿದ ರಾಸಾಯನಿಕ ಸಮೀಕರಣಗಳನ್ನು ಬರೆಯಿರಿ :

(i) ಕೆಂಪಗೆ ಕಾಸಿದ ಕಬ್ಬಿಣವು ಹಬೆಯೊಂದಿಗೆ ವರ್ತಿಸಿದೆ.

(ii) ಮೆಗ್ನೀಷಿಯಂ, ಸಾರರಿಕ್ತ ಆಮ್ಲದೊಂದಿಗೆ ವರ್ತಿಸಿದೆ.

*ಉತ್ತರ :*

(i) $3Fe + 4H_2O \rightarrow Fe_3O_4 + 4H_2$ — 1

(ii) $Mg + 2HCl \rightarrow MgCl_2 + H_2\uparrow$ — 1 — 2

46. (i) ಪರ್ಯಾಪ್ತ ಮತ್ತು ಅಪರ್ಯಾಪ್ತ ಹೈಡ್ರೋಕಾರ್ಬನ್‌ಗಳಿಗಿರುವ ವ್ಯತ್ಯಾಸಗಳನ್ನು ಬರೆಯಿರಿ.

(ii) ಕಾರ್ಬನ್‌ನ ಐದು ಪರಮಾಣುಗಳನ್ನು ಹೊಂದಿರುವ ಆಲ್ಕೀನ್‌ನ ಅಣುಸೂತ್ರ ಮತ್ತು ರಚನಾಸೂತ್ರವನ್ನು ಬರೆಯಿರಿ.

**ಅಥವಾ**

(i) ಕಾರ್ಬನ್ ಪರಮಾಣುವು $C^{4-}$ ಆ್ಯನಯಾನನ್ನು ಮತ್ತು $C^{4+}$ ಕ್ಯಾಟಯಾನನ್ನು ಉಂಟು ಮಾಡುವುದಿಲ್ಲ. ಏಕೆ ?

(ii) ಎಥನಾಲ್ ಅನ್ನು ಎಥನೋಯಿಕ್ ಆಮ್ಲವನ್ನಾಗಿ ಹೇಗೆ ಪರಿವರ್ತಿಸಬಹುದು ?

| ಪ್ರಶ್ನೆ ಸಂಖ್ಯೆ | ಪ್ರಶ್ನಾನುಸಾರ ಮೌಲ್ಯಮಾಪನ | ಅಂಕಗಳು |
|---|---|---|

*ಉತ್ತರ :*

(i) *ಪರ್ಯಾಪ್ತ ಹೈಡ್ರೋಕಾರ್ಬನ್‌ಗಳು :*

★ ಕಾರ್ಬನ್ ಪರಮಾಣುಗಳ ನಡುವೆ ಏಕಬಂಧದಿಂದ ಸಂತೃಪ್ತಗೊಂಡಿರುವ ಸಂಯುಕ್ತಗಳು. ½


★ ಸಾಮಾನ್ಯವಾಗಿ ಕ್ರಿಯಾಶೀಲ ಆಗಿರುವುದಿಲ್ಲ. ½

*ಅಪರ್ಯಾಪ್ತ ಹೈಡ್ರೋಕಾರ್ಬನ್‌ಗಳು :*

★ ಕಾರ್ಬನ್ ಪರಮಾಣುಗಳ ನಡುವೆ ದ್ವಿಬಂಧ ಅಥವಾ ತ್ರಿಬಂಧ ಹೊಂದಿರುವ ಅಸಂತೃಪ್ತ ಹೈಡ್ರೋಕಾರ್ಬನ್‌ಗಳು. ½

★ ಪರ್ಯಾಪ್ತ ಸಂಯುಕ್ತಗಳಿಗಿಂತ ಹೆಚ್ಚು ಕ್ರಿಯಾಶೀಲವಾಗಿವೆ. ½

(ii) $C_5H_{10}$ ½



½ 3

**ಅಥವಾ**

(i) ★ ಕಾರ್ಬನ್ ನಾಲ್ಕು ಇಲೆಕ್ಟ್ರಾನ್‌ಗಳನ್ನು ಪಡೆದುಕೊಳ್ಳುವಂತಾದರೆ ಆರು ಪ್ರೋಟಾನ್‌ಗಳಿರುವ ಬೀಜಕೇಂದ್ರವು ಹತ್ತು ಇಲೆಕ್ಟ್ರಾನ್‌ಗಳನ್ನು ಹಿಡಿದಿಟ್ಟುಕೊಳ್ಳುವುದು ಅಂದರೆ ನಾಲ್ಕು ಹೆಚ್ಚುವರಿ ಇಲೆಕ್ಟ್ರಾನ್‌ಗಳನ್ನು ಹಿಡಿದಿಟ್ಟುಕೊಳ್ಳುವುದು ಕಷ್ಟವಾಗಬಹುದು. 1

★ ಕಾರ್ಬನ್ ಪರಮಾಣುವು ನಾಲ್ಕು ಇಲೆಕ್ಟ್ರಾನ್‌ನ್ನು ಕಳೆದುಕೊಳ್ಳುವಂತಾದರೆ ಕಾರ್ಬನ್‌ನಿಂದ ನಾಲ್ಕು ಇಲೆಕ್ಟ್ರಾನ್‌ಗಳನ್ನು ಹೊರತೆಗೆಯಲು ಹೆಚ್ಚಿನ ಪ್ರಮಾಣದ ಶಕ್ತಿಯ ಅವಶ್ಯಕತೆಯಿದೆ. ಇದರಿಂದ ಬೀಜಕೇಂದ್ರದಲ್ಲಿ ಆರು ಪ್ರೋಟಾನ್‌ಗಳುಳ್ಳ ಕಾರ್ಬನ್ ಕ್ಯಾಟಯಾನ್ ಕೇವಲ ಎರಡು ಇಲೆಕ್ಟ್ರಾನ್‌ಗಳೊಂದಿಗೆ ಉಳಿಯುತ್ತದೆ. 1

(ii) ಈಥೈಲ್ ಆಲ್ಕೋಹಾಲ್‌ಗೆ ಪ್ರತ್ಯಾಮ್ಲೀಯ ಪೊಟಾಸಿಯಂ ಪರಮಾಂಗನೇಟ್ ಅಥವಾ ಆಮ್ಲೀಯ ಪೊಟಾಸಿಯಂ ಡೈಕ್ರೋಮೇಟ್‌ನ್ನು ಸೇರಿಸಿ ಕಾಯಿಸಿದಾಗ ಉತ್ಕರ್ಷಣೆ ಹೊಂದಿ ಎಥನೋಯಿಕ್ ಆಮ್ಲವಾಗುತ್ತದೆ. 1 3

**ಅಥವಾ**

$$C_2H_5OH \xrightarrow[\text{ಅಥವಾ ಆಮ್ಲೀಯ } K_2Cr_2O_7 + \text{ ಶಾಖ}]{\text{ಕ್ಷಾರಿಯ } KMnO_4 + \text{ ಶಾಖ}} CH_3COOH$$

| ಪ್ರಶ್ನೆ ಸಂಖ್ಯೆ | ಪ್ರಶ್ನಾನುಸಾರ ಮೌಲ್ಯಮಾಪನ | ಅಂಕಗಳು |
|---|---|---|

49. ಕೊಟ್ಟಿರುವ ಕೋಷ್ಟಕವನ್ನು ಗಮನಿಸಿ ಮತ್ತು ಕೆಳಗಿನ ಪ್ರಶ್ನೆಗೆ ಉತ್ತರಿಸಿ :

| ***ಧಾತುಗಳು*** | *A* | *B* | *C* | *D* | *E* |
|---|---|---|---|---|---|
| ***ಪರಮಾಣು ಸಂಖ್ಯೆ*** | 11 | 4 | 2 | 7 | 19 |

ಒಂದೇ ಆವರ್ತಕ್ಕೆ ಸೇರಿರುವ ಎರಡು ಧಾತುಗಳನ್ನು ಮತ್ತು ಒಂದೇ ಗುಂಪಿಗೆ ಸೇರಿರುವ ಎರಡು ಧಾತುಗಳನ್ನು ಪತ್ತೆ ಮಾಡಿ, ನಿಮ್ಮ ತೀರ್ಮಾನಕ್ಕೆ ಕಾರಣ ಕೊಡಿ.

***ಉತ್ತರ :***

★ '*B*' ಮತ್ತು '*D*' ಧಾತುಗಳು ಒಂದೇ ಆವರ್ತದಲ್ಲಿವೆ ಏಕೆಂದರೆ ಇವುಗಳ ಪರಮಾಣುವಿನಲ್ಲಿ ಎರಡು ಕವಚಗಳಿವೆ. 1½

★ '*A*' ಮತ್ತು '*E*' ಧಾತುಗಳು ಒಂದೇ ಗುಂಪಿನಲ್ಲಿವೆ ಏಕೆಂದರೆ ಇವುಗಳ ಪರಮಾಣುವಿನ ಹೊರಕವಚದಲ್ಲಿ ಒಂದು ಎಲೆಕ್ಟ್ರಾನ್ ಇದೆ. 1½ 3

51. ಕಾರಣ ಕೊಡಿ :

(i) ಅಯಾನಿಕ ಸಂಯುಕ್ತಗಳು ಘನಸ್ಥಿತಿಯಲ್ಲಿದ್ದಾಗ, ವಿದ್ಯುತ್ ಅವಾಹಕಗಳು ದ್ರವಿಸಿದ ಸ್ಥಿತಿಯಲ್ಲಿದ್ದಾಗ ಒಳ್ಳೆಯ ವಿದ್ಯುದ್ವಾಹಕಗಳು.

(ii) ಬೆಳ್ಳಿಯ ಪಾತ್ರೆಗಳನ್ನು ಗಾಳಿಗೆ ತೆರೆದಿಟ್ಟಾಗ ಕ್ರಮೇಣ ಕಪ್ಪಾಗುತ್ತವೆ.

(iii) ಕಬ್ಬಿಣದ ಸಲ್ಫೇಟ್ ದ್ರಾವಣಕ್ಕೆ ತಾಮ್ರವನ್ನು ಸೇರಿಸಿದಾಗ ರಾಸಾಯನಿಕ ಕ್ರಿಯೆ ನಡೆಯುವುದಿಲ್ಲ.

**ಅಥವಾ**

ಕಾರಣ ಕೊಡಿ :

(i) ಶುದ್ಧ ಕಬ್ಬಿಣಕ್ಕಿಂತ ಕಬ್ಬಿಣದ ಮಿಶ್ರಲೋಹಗಳು ಹೆಚ್ಚು ಉಪಯುಕ್ತವಾಗಿವೆ.

(ii) ತಾಮ್ರವನ್ನು ಗಾಳಿಗೆ ತೆರೆದಿಟ್ಟಾಗ ಕ್ರಮೇಣ ಕಂದು ಪದರವನ್ನು ಕಳೆದುಕೊಳ್ಳುತ್ತದೆ.

(iii) ಅಲ್ಯೂಮಿನಿಯಂ ಆಕ್ಸೈಡ್‌ಅನ್ನು ಉಭಯಧರ್ಮಿ ಆಕ್ಸೈಡ್ ಎನ್ನುವರು.

***ಉತ್ತರ :***

(i) ★ ಅಯಾನಿಕ ಸಂಯುಕ್ತಗಳು ಘನಸ್ಥಿತಿಯಲ್ಲಿದ್ದಾಗ, ಧನ ಮತ್ತು ಋಣ ಅಯಾನುಗಳ ನಡುವೆ ಪ್ರಬಲ ಆಕರ್ಷಣ ಬಲವಿದ್ದು, ಅವು ಕಠಿಣವಾಗಿರುತ್ತವೆ ಇದರಿಂದ ಅಯಾನುಗಳ ಚಲನೆ ಸಾಧ್ಯವಿಲ್ಲ. 1

| ಪ್ರಶ್ನೆ ಸಂಖ್ಯೆ | ಪ್ರಶ್ನಾನುಸಾರ ಮೌಲ್ಯಮಾಪನ | | ಅಂಕಗಳು |
|---|---|---|---|
| | ★ ದ್ರವಿಸಿದ ಸ್ಥಿತಿಯಲ್ಲಿ ವಿದ್ಯುದಂಶಪೂರಿತ ವಿರುದ್ಧ ಅಯಾನುಗಳ ನಡುವಣ ವಿದ್ಯುದಾಕರ್ಷಣ ಬಲಗಳು ಉಷ್ಣತೆಗೆ ಒಡೆಯುತ್ತವೆ. | ½ | |
| | ★ ಹಾಗಾಗಿ ಅಯಾನುಗಳು ಸ್ವತಂತ್ರವಾಗಿ ಚಲಿಸುತ್ತವೆ ಮತ್ತು ವಿದ್ಯುತ್ ಅನ್ನು ಹರಿಯಲು ಬಿಡುತ್ತವೆ. | ½ | |
| | (ii) ಬೆಳ್ಳಿ ಗಾಳಿಯಲ್ಲಿರುವ ಸಲ್ಫರ್‌ನ ಜೊತೆ ವರ್ತಿಸಿ ಬಳ್ಳಿಯ ಸಲ್ಫೈಡ್ ಪದರವನ್ನು ಉಂಟುಮಾಡುತ್ತದೆ. | 1 | |
| | (iii) ತಾಮ್ರದ ಕ್ರಿಯಾಶೀಲತೆಯು ಕಬ್ಬಿಣಕ್ಕಿಂತ ಕಡಿಮೆ ಇರುತ್ತದೆ. | 1 | 4 |
| | ***ಅಥವಾ*** | | |
| | (i) ★ ಶುದ್ಧ ಕಬ್ಬಿಣವು ತುಂಬಾ ಮೃದುವಾಗಿರುತ್ತದೆ. | ½ | |
| | ★ ಉಷ್ಣತೆ ನೀಡಿದಾಗ ಸುಲಭವಾಗಿ ಹಿಗ್ಗುತ್ತದೆ. | ½ | |
| | ★ ಮಿಶ್ರಲೋಹಗಳು ಗಟ್ಟಿಯಾಗಿರುತ್ತವೆ. | ½ | |
| | ★ ಕಬ್ಬಿಣವನ್ನು ಬೇರೆ ವಸ್ತುಗಳ ಜೊತೆ ಮಿಶ್ರಗೊಳಿಸಿದರೆ ಅದರ ಗುಣದಲ್ಲಿ ಬದಲಾವಣೆಯಾಗುತ್ತದೆ. | ½ | |
| | (ii) ತಾಮ್ರವು ಗಾಳಿಯಲ್ಲಿರುವ ತೇವಪೂರಿತ ಇಂಗಾಲದ ಡೈ ಆಕ್ಸೈಡ್ ಜೊತೆ ವರ್ತಿಸಿ ಕಂದು ಪದರವನ್ನು ಕಳೆದುಕೊಳ್ಳುತ್ತದೆ. ತಾಮ್ರದ ಕಾರ್ಬೋನೇಟ್ ಉಂಟಾಗುತ್ತದ. | 1 | |
| | (iii) ಅಲ್ಯೂಮಿನಿಯಂ ಆಕ್ಸೈಡ್ ( $Al_2O_3$ ) ಆಮ್ಲ ಮತ್ತು ಪ್ರತ್ಯಾಮ್ಲಗಳೆರಡರ ಜೊತೆಗೂ ಪ್ರತಿವರ್ತಿಸಿದಾಗ ಲವಣ ಮತ್ತು ನೀರನ್ನು ಉತ್ಪತ್ತಿ ಮಾಡುತ್ತದೆ. | 1 | 4 |